# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : | 2387 |
| ಸದಸ್ಯರ ಹೆಸರು : | ಶ್ರೀ ಡಿ.ಟಿ. ಶ್ರೀನಿವಾಸ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ : | 27.03.2026 |
| ಉತ್ತರಿಸುವ ಸಚಿವರು : | ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಅಲೆಮಾರಿ/ಅರೆ ಅಲೆಮಾರಿ ಜನಾಂಗದವರ ಕಾಲೋನಿಗಳ ಅಭಿವೃದ್ಧಿ 2025-26ನೇ ಸಾಲಿನ ಆಯವ್ಯಯದಲ್ಲಿ ನಿಗಧಿಪಡಿಸಿದ ಅನುದಾನ ಎಷ್ಟು; ಬಿಡುಗಡೆಯಾದ ಹಣವೆಷ್ಟು; | ಅಲೆಮಾರಿ/ಅರೆ ಅಲೆಮಾರಿ ಜನಾಂಗದವರ ಕಾಲೋನಿಗಳ ಅಭಿವೃದ್ಧಿಗೆ ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 416 ಬಿಎಂಎಸ್ 2025, ದಿನಾಂಕ:10.02.2026ರಲ್ಲಿ 2025-26ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-206ರಲ್ಲಿ ಅಲೆಮಾರಿ/ಅರೆ ಅಲೆಮಾರಿ ಜನಾಂಗದವರ ಕಾಲೋನಿಗಳ ಸಮಗ್ರ ಅಭಿವೃದ್ಧಿಗಾಗಿ ರೂ.100.00 ಕೋಟಿಗಳ ಅನುದಾನವನ್ನು ಘೋಷಿಸಲಾಗಿದ್ದು, ಈ ಅನುದಾನದಲ್ಲಿ ಹಂತ-ಹಂತವಾಗಿ ಅಲೆಮಾರಿ/ ಅರೆ ಅಲೆಮಾರಿ ಜನಾಂಗದವರಿಗಾಗಿ ರೂ.10.00 ಲಕ್ಷಗಳ ಘಟಕ ವೆಚ್ಚದಲ್ಲಿ ಅಗತ್ಯ ಮೂಲಭೂತ ಸೌಕರ್ಯಗಳನ್ನೊಳಗೊಂಡಂತೆ ವಸತಿ ಸೌಲಭ್ಯವನ್ನು ಕಲ್ಪಿಸಲು ತುಮಕೂರು, ಕೊಪ್ಪಳ, ಕಲಬುರಗಿ ಮತ್ತು ಚಿತ್ರದುರ್ಗ ಜಿಲ್ಲೆಗಳಲ್ಲಿ ನಿರ್ಮಿತಿ ಕೇಂದ್ರಗಳ ಮೂಲಕ ಕಾಮಗಾರಿಗಳನ್ನು ಕೈಗೊಳ್ಳಲು ಆದೇಶಿಸಲಾಗಿರುತ್ತದೆ.<br><br>ಅದರಂತೆ, 2025-26ನೇ ಸಾಲಿನಲ್ಲಿ ಒದಗಿಸಿರುವ ರೂ.30 ಕೋಟಿಗಳ ಅನುದಾನದಲ್ಲಿ ತುಮಕೂರು ಜಿಲ್ಲೆಯ ಸಿರಾ ತಾಲ್ಲೂಕಿನಲ್ಲಿ 20 ಎಕರೆ ಜಮೀನಿನಲ್ಲಿ ಮೊದಲ ಹಂತದಲ್ಲಿ ವಸತಿ ಸೌಲಭ್ಯವನ್ನು ಕಲ್ಪಿಸಲು ರೂ.30.00 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ. |
| ಆ) | ಪೂರ್ಣ ಹಣವನ್ನು ಬಿಡುಗಡೆ ಮಾಡಲಾಗಿದೆಯೇ; ಮಾಡದೇ ಇದ್ದಲ್ಲಿ, ಕಾರಣವೇನು: ಮಾಹಿತಿ ಒದಗಿಸುವುದು; | |

| | | |
|---|---|---|
| ಇ) | ನಿಗದಿತ ಉದ್ದೇಶಕ್ಕೆ ಬಿಡುಗಡೆಯಾದ ಹಣವನ್ನು ಬೇರೆ-ಬೇರೆ ಯೋಜನೆಗಳಿಗೆ ವಿನಿಯೋಗಿಸಲು ಅವಕಾಶವಿದೆಯೇ; ವಿನಿಯೋಗಿಸಿದ್ದಲ್ಲಿ, ಯಾವ ಯೋಜನೆಗಳಿಗೆ ವಿನಿಯೋಗಿಸಲಾಗಿದೆ; ವಿವರವಾದ ಮಾಹಿತಿ ನೀಡುವುದು; | 2025-26ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-206ರಲ್ಲಿ ಅಲೆಮಾರಿ/ಅರೆ ಅಲೆಮಾರಿ ಜನಾಂಗದವರ ಕಾಲೋನಿಗಳ ಸಮಗ್ರ ಅಭಿವೃದ್ಧಿಗಾಗಿ ರೂ.100.00 ಕೋಟಿಗಳ ಅನುದಾನವನ್ನು ಘೋಷಿಸಿದ್ದು, 2025-26ನೇ ಸಾಲಿನಲ್ಲಿ ಒದಗಿಸಿರುವ ಅನುದಾನದಲ್ಲಿ ಅಲೆಮಾರಿ/ ಅರೆ ಅಲೆಮಾರಿ ಜನಾಂಗದವರಿಗಾಗಿ ಅಗತ್ಯ ಮೂಲಭೂತ ಸೌಕರ್ಯಗಳನ್ನೊಳಗೊಂಡಂತೆ ವಸತಿ ಸೌಲಭ್ಯವನ್ನು ಕಲ್ಪಿಸಲು ತುಮಕೂರು, ಕೊಪ್ಪಳ, ಕಲಬುರಗಿ ಮತ್ತು ಚಿತ್ರದುರ್ಗ ಜಿಲ್ಲೆಗಳಲ್ಲಿ ಕಾಮಗಾರಿಗಳನ್ನು ಕೈಗೊಳ್ಳಲು ಆರ್ಥಿಕ ಇಲಾಖೆಯ ಸಹಮತಿಯನ್ವಯ ಆದೇಶಿಸಿದ್ದು, ಅದರಂತೆ ನಿಗಧಿತ ಉದ್ದೇಶಕ್ಕೆ ಬಿಡುಗಡೆಯಾದ ಅನುದಾನವನ್ನು ಅದೇ ಉದ್ದೇಶಕ್ಕೆ ಮಾತ್ರ ವಿನಿಯೋಗಿಸಲಾಗುತ್ತದೆ. |
| ಅ) | ಅನ್ಯ ಉದ್ದೇಶಕ್ಕೆ ಬಳಸಿದರೆ ಅಲೆಮಾರಿ/ ಅರೆ ಅಲೆಮಾರಿ ಜನಾಂಗದ ಅಭಿವೃದ್ಧಿಗೆ ಅನ್ಯಾಯವಾಗುವುದಿಲ್ಲವೇ; ಈ ಅನ್ಯಾಯವನ್ನು ಸರ್ಕಾರವು ಹೇಗೆ ಸರಿಪಡಿಸಲು ಕ್ರಮವಹಿಸುವುದು? | |

**ಸಂಖ್ಯೆ:ಹಿಂವಕ 309 ಬಿಂಎಂಎಸ್ 2026**

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು